# ರಾಷ್ಟ್ರಪತಿಗಳನ್ನು ಭೇಟಿ ಮಾಡಿದ ಬಾಂಗ್ಲಾದೇಶದ ಪ್ರಧಾನಮಂತ್ರಿ

ಜೂನ್ 22, 2024

ಪೀಪಲ್ಸ್ ರಿಪಬ್ಲಿಕ್ ಆಫ್ ಬಾಂಗ್ಲಾದೇಶದ ಪ್ರಧಾನಮಂತ್ರಿ ಘನತೆವೆತ್ತ ಶೇಖ್ ಹಸೀನಾ ಅವರು ಇಂದು (22 ಜೂನ್ 2024) ರಾಷ್ಟ್ರಪತಿ ಭವನದಲ್ಲಿ ದ್ರೌಪದಿ ಮುರ್ಮು ಅವರನ್ನು ಭೇಟಿಯಾದರು.

ಪ್ರಧಾನಮಂತ್ರಿ ಶೇಖ್ ಹಸೀನಾ ಅವರನ್ನು ಸ್ವಾಗತಿಸಿದ ರಾಷ್ಟ್ರಪತಿಗಳು, ಹೊಸ ಸರ್ಕಾರದ ಪ್ರಮಾಣವಚನ ಸಮಾರಂಭದ ಕೆಲವೇ ದಿನಗಳ ನಂತರ ಅವರನ್ನು ಮತ್ತೆ ಭೇಟಿಯಾಗಲು ಸಂತೋಷವಾಗಿದೆ ಎಂದರು. ಈ ನಿಯಮಿತ ಸಂವಾದಗಳು 1971 ರ ಬಾಂಗ್ಲಾದೇಶದ ವಿಮೋಚನಾ ಯುದ್ಧದ ಪ್ರಯಾಣದಿಂದ ಪ್ರಾರಂಭವಾದ ಸ್ನೇಹ ಮತ್ತು ಸಹಕಾರದ ಶಾಶ್ವತ ಮನೋಭಾವವನ್ನು ಪ್ರತಿಬಿಂಬಿಸುತ್ತವೆ ಎಂದು ಅವರು ಹೇಳಿದರು.

ಪ್ರಧಾನಮಂತ್ರಿ ಶೇಖ್ ಹಸೀನಾ ಅವರ ನಾಯಕತ್ವದಲ್ಲಿ ಬಾಂಗ್ಲಾದೇಶವು ಗಮನಾರ್ಹ ಆರ್ಥಿಕ ಪ್ರಗತಿ ಸಾಧಿಸಿದೆ ಎಂದು ರಾಷ್ಟ್ರಪತಿಗಳು ಸಂತಸ ವ್ಯಕ್ತಪಡಿಸಿದರು

ಭಾರತ ಮತ್ತು ಬಾಂಗ್ಲಾದೇಶ ವಿವಿಧ ಕ್ಷೇತ್ರಗಳಲ್ಲಿ ತಮ್ಮ ಸಹಕಾರವನ್ನು ಬಲಪಡಿಸಲು ವೇಗವಾಗಿ ಮುಂದುವರಿಯುತ್ತಿವೆ ಹಾಗೂ ಹೊಸ ಕ್ಷೇತ್ರಗಳಿಗೂ ಪ್ರವೇಶಿಸುತ್ತಿವೆ ಎಂದು ರಾಷ್ಟ್ರಪತಿ ತಿಳಿಸಿದರು. ಇದು ಭಾರತ-ಬಾಂಗ್ಲಾದೇಶ ಸಂಬಂಧದ ಭವಿಷ್ಯದ ಹಾದಿಯನ್ನು ರೂಪಿಸುತ್ತದೆ ಎಂಬ ವಿಶ್ವಾಸವನ್ನು ಅವರು ವ್ಯಕ್ತಪಡಿಸಿದರು.

ಆತ್ಮೀಯ ಮತ್ತು ಸೌಹಾರ್ದಯುತ ಸಂಭಾಷಣೆಯ ಸಮಯದಲ್ಲಿ, ಆರ್ಥಿಕ ಸಂಬಂಧಗಳು, ಅಭಿವೃದ್ಧಿ ಪಾಲುದಾರಿಕೆ, ರಕ್ಷಣಾ ಸಹಕಾರ, ಇಂಧನ ಭದ್ರತೆ ಮತ್ತು ಸಂಪರ್ಕ ಸೇರಿದಂತೆ ಎಲ್ಲಾ ಕ್ಷೇತ್ರಗಳಲ್ಲಿ ಸಂಬಂಧವನ್ನು ಹೆಚ್ಚಿಸಲು ಒಟ್ಟಾಗಿ ಕೆಲಸ ಮಾಡಲು ಇಬ್ಬರೂ ನಾಯಕರು ಒಪ್ಪಿಕೊಂಡರು.

ಜೂನ್ 09, 2024 ರಂದು ಹೊಸ ಸರ್ಕಾರ ರಚನೆಯಾದ ನಂತರ ಭಾರತ ಆಯೋಜಿಸಿದ ಮೊದಲ ಅಧಿಕೃತ ಭೇಟಿ ಇದಾಗಿದೆ.

ನವದೆಹಲಿ

**ಜೂನ್ 22, 2024**